ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು
Karnataka School Quality Assessment & Accreditation Council
ಕೆ.ಎಸ್.ಇ.ಇ.ಬಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03. ದೂರವಾಣಿ ಸಂಖ್ಯೆ: 23341615, 23562283, 29720300
e-mail: ksqaacbangalore@gmail.com & ksqaacbengaluru@gmail.com

ಸಂಖ್ಯೆ: ಕೆ3/ NMMS ಪರೀಕ್ಷೆ/14/2022-23 ದಿನಾಂಕ:21.10.2022

# ಜ್ಞಾಪನ

ವಿಷಯ: 2022-23ನೇ ಸಾಲಿನ NMMS ಪರೀಕ್ಷೆಗೆ ಸಂಬಂಧಿಸಿದಂತೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆಗೆ ದಿನಾಂಕವನ್ನು ವಿಸ್ತರಿಸಿರುವ ಬಗ್ಗೆ.

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಮಸಂಖ್ಯೆ ದಿನಾಂಕ: 22.09.2022

~*~*~*~

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2022-23ನೇ ಸಾಲಿನ NMMS ಪರೀಕ್ಷೆಯನ್ನು ದಿನಾಂಕ:**18.12.2022** ರಂದು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಕೆ.ಎಸ್.ಕ್ಯು.ಎ.ಎ.ಸಿ ವತಿಯಿಂದ ನಡೆಸಲಾಗುತ್ತಿದೆ. ಉಲ್ಲೇಖಿತ ಸುತ್ತೋಲೆಯಲ್ಲಿ ದಿನಾಂಕ: **29.09.2022** ರಿಂದ **25.10.2022** ರವರೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆಗೆ ಅವಕಾಶವನ್ನು ನೀಡಲಾಗಿತ್ತು. ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರ ಕೋರಿಕೆಯ ಮೇರೆಗೆ ಈ ಪರೀಕ್ಷೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ದಿನಾಂಕ:**10.11.2022** ರವರೆಗೆ ವಿಸ್ತರಿಸಲಾಗಿದೆ. ಈ ಸಂಬಂಧ ಉಪನಿರ್ದೇಶಕರು (ಆಡಳಿತ), ಉಪನಿರ್ದೇಶಕರು (ಅಭಿವೃದ್ಧಿ), ಸಂಬಂಧಿಸಿದ ನೋಡಲ್ ಅಧಿಕಾರಿಗಳು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರಿಗೆ ಮಾಹಿತಿಯನ್ನು ನೀಡುವುದು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿ ಸಲ್ಲಿಸಲು ಕ್ರಮವಹಿಸುವುದು.

ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರು ತಮ್ಮ ಶಾಲೆಯಿಂದ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ಪಾವತಿಸಲು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿರುವ ದಿನಾಂಕ ಮುಕ್ತಾಯವಾದ ಮರುದಿನ ಶಾಲಾ ಲಾಗಿನ್‌ನಲ್ಲಿ ಚಲನ್ ಲಭ್ಯ ಮಾಡಲಾಗುವುದು ಆ ನಂತರವೇ ಚಲನ್ ಬಳಸಿ ಪರೀಕ್ಷಾ ಶುಲ್ಕ ಪಾವತಿಸುವುದು.

21/10/22

ಕಾರ್ಯನಿರ್ವಾಹಕ ನಿರ್ದೇಶಕರು
ಕೆ.ಎಸ್.ಕ್ಯು.ಎ.ಎ.ಸಿ

**ಪ್ರತಿಯನ್ನು ಅಗತ್ಯ ಕ್ರಮಕ್ಕಾಗಿ:-**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ.
2. ರಾಜ್ಯದ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ರವರಿಗೆ.
3. NMMS ಪರೀಕ್ಷೆಗಳಿಗೆ ಸಂಬಂಧಿಸಿದ ನೋಡಲ್ ಅಧಿಕಾರಿಗಳಿಗೆ.
4. ಎಲ್ಲಾ ಬ್ಲಾಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
5. ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ)
6. ಶಾಖಾಧಿಕಾರಿಗಳು, ಗಣಕ ಶಾಖೆ, ಕೆ.ಎಸ್.ಇ.ಇ.ಬಿ ರವರಿಗೆ.

**ಪ್ರತಿಯನ್ನು ಗೌರವಪೂರ್ವಕವಾಗಿ ಮಾಹಿತಿಗಾಗಿ:-**

1. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು ರವರಿಗೆ.
2. ಅಪರ ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಕಲಬುರ್ಗಿ ಮತ್ತು ಧಾರವಾಡ ರವರಿಗೆ.
3. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಸಂಸ್ಥೆ, ಬೆಂಗಳೂರು ರವರಿಗೆ.
4. ನಿರ್ದೇಶಕರು, ಪ್ರಾಥಮಿಕ ಶಿಕ್ಷಣ, ಆಯುಕ್ತರ ಕಛೇರಿ, ಬೆಂಗಳೂರು ರವರಿಗೆ.
5. ನಿರ್ದೇಶಕರು, ಪ್ರೌಢ ಶಿಕ್ಷಣ, ಆಯುಕ್ತರ ಕಛೇರಿ, ಬೆಂಗಳೂರು ರವರಿಗೆ.
6. ಕಛೇರಿ ಪ್ರತಿ.